# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ: 04-01-2022 ರಂದು ನಡೆದ ವಾರ್ಡ್ ಕಮಿಟಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29.
4. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)
6. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)
7. ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
2. ಶ್ರೀ ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
3. ಶ್ರೀ ದವಲ್, ಇಂಜಿನಿಯರ್, ಬಿಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ,
4. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
5. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಬೆಸ್ಕಾಂ ಇಲಾಖೆ,
7. ಶ್ರೀಮತಿ ರಾಜೇಶ್ವರಿ, ಕಲ್ಯಾಣ ಇಲಾಖೆ,
8. ಶ್ರೀ ವೆಂಕಟೇಶ್, ತೋಟಗಾರಿಕೆ ಇಲಾಖೆ,
9. ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯ ನಡವಳಿಗಳು**

1) **ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)** ರವರು ಮಾತನಾಡಿ, ವಾರ್ಡಿನ ಪ್ರಮುಖ ರಸ್ತೆಗಳಾದ ಕಮ್ಮನಹಳ್ಳಿ ಮುಖ್ಯರಸ್ತೆ ಹಾಗೂ ಹೆಣ್ಣೂರು ಮುಖ್ಯರಸ್ತೆಗಳ ಪಾದಾಚಾರಿ ಮಾರ್ಗಗಳನ್ನು ಒತ್ತುವರಿ ಮಾಡಿಕೊಂಡು ವ್ಯಾಪಾರ ವಹಿವಾಟು ಮಾಡುತ್ತಿದ್ದು, ಸಾರ್ವಜನಿಕರಿಗೆ ಹಾಗೂ ಹಿರಿಯ ನಾಗರೀಕರಿಗೆ ಪಾದಾಚಾರಿ ಮಾರ್ಗದಲ್ಲಿ ಓಡಾಡಲು ಕಷ್ಟಕರವಾಗಿರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಈ ಬಗ್ಗೆ ಚರ್ಚಿಸಿ, ಮಾನ್ಯ ಅಧ್ಯಕ್ಷರು ಆರೋಗ್ಯ ಇಲಾಖೆ, ಕಾಮಗಾರಿ ಇಲಾಖೆ, ಕಂದಾಯ ಇಲಾಖೆ ಸಿಬ್ಬಂಧಿಗಳು ಪೋಲೀಸರ ಸಹಕಾರದೊಂದಿಗೆ ಒತ್ತುವರಿ ಮಾಡಿಕೊಂಡಿರುವ ವಾರ್ಡಿನ ಪ್ರಮುಖ ರಸ್ತೆಗಳ ಪಾದಾಚಾರಿ ಮಾರ್ಗವನ್ನು ತೆರವುಗೊಳಿಸುವ ಕಾರ್ಯಾಗಾರವನ್ನು ಹಮ್ಮಿಕೊಳ್ಳಲು ಸೂಚಿಸಿದರು.



Scanned with CamScanner

2) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ರಾಮಯ್ಯ ಬಡಾವಣೆ ಇ ಕ್ರಾಸ್‌ನಲ್ಲಿ ಗಾರ್ಬೇಜ್ ಸತತವಾಗಿ ಸ್ವಚ್ಛ ಮಾಡುತ್ತಿರುತ್ತಾರೆ. ಆದಾಗ್ಯೂ ಸ್ವಚ್ಛ ಮಾಡಿದ ನಂತರ ಕಸವನ್ನು ಸುರಿಯುತ್ತಾರೆ. ಈ ಬಗ್ಗೆ ಕ್ರಮ ಕೈಗೊಳ್ಳಲು ಸಭಾ ಗಮನಕ್ಕೆ ತಂದಾಗ, ಈ ಬಗ್ಗೆ ಸಭೆಯಲ್ಲಿ ಚರ್ಚಿಸಿ, ಸಭೆಯಲ್ಲಿ ಹಾಜರಿದ್ದ ಮಾರ್ಷಲ್ ರವರಿಗೆ ದಂಡವನ್ನು ವಿಧಿಸಲು ಕ್ರಮ ಕೈಗೊಳ್ಳಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

3) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ), ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ) ಮತ್ತು ಶ್ರೀಮತಿ ಸರಸ್ವತಿ, ಸದಸ್ಯರು, ಜಲವಾಯು ವಿಹಾರ್ ಅಸೋಸಿಯೇಷನ್(ರಿ)** ರವರು ಮಾತನಾಡಿ ಇತ್ತೀಚೆಗೆ ವಾರ್ಡ್ ಪ್ರದೇಶದ ಎಲ್ಲಾ ರಸ್ತೆಗಳ ಗುಂಡಿಗಳನ್ನು ಡಾಂಬರು ಮುಖಾಂತರ ತುಂಬಿ ಮುಚ್ಚಿದ್ದು, ವಾರ್ಡ್ ಪ್ರದೇಶದ ಎಲ್ಲಾ ರಸ್ತೆಗಳನ್ನು ಗುಂಡಿ ಮುಕ್ತ ರಸ್ತೆಗಳನ್ನಾಗಿ ಮಾಡಿರುವುದಕ್ಕೆ ಶ್ಲಾಘನೆ ವ್ಯಕ್ತಪಡಿಸಿರುತ್ತಾರೆ.

4) **ಡಾ॥ ರಾಣಿ, ವೈದ್ಯಾಧಿಕಾರಿಗಳ ಕಛೇರಿ ವಾರ್ಡ್ ಸಂಖ್ಯೆ.29 ರವರು ಮಾತನಾಡಿ,** ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಒಟ್ಟು 15 ಕೋವಿಡ್ ಸೋಂಕಿತ ಪ್ರಕರಣಗಳಿದ್ದು, ಈ ಪೈಕಿ 02 ಪ್ರಕರಣಗಳು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುತ್ತಾರೆ ಹಾಗೂ ಆರ್.ಟಿ.ಪಿ.ಸಿ.ಆರ್ ಹಾಗೂ ರ್ಯಾಪಿಡ್ ಪರೀಕ್ಷೆಗಳನ್ನು ನಿರಂತರವಾಗಿ ಸಾರ್ವಜನಿಕರಿಗೆ ಒಟ್ಟು 56210 ಪರೀಕ್ಷೆಗಳನ್ನು ಮಾಡಲಾಗಿರುತ್ತದೆ. ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಒಟ್ಟು ವ್ಯಾಕ್ಸಿನೇಷನ್ 53220 ಜನರಿಗೆ ಲಸಿಕೆ ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

Prasanna Kumar.A
ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

**ಪ್ರತಿಯನ್ನು**

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.

Scanned with CamScanner